**All India Radio: Bangalore**
**Regional Bulletin In Kannada**
**19.04.2026 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಮೂಢನಂಬಿಕೆಗಳನ್ನು ತೊರೆದು ವೈಚಾರಿಕತೆ ಅಳವಡಿಸಿಕೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ
2. ಇಂಧನ ಕ್ಷೇತ್ರದಲ್ಲಿ ಸ್ವಾವಲಂಬಿಯಾಗಲು ರಾಜ್ಯಕ್ಕೆ ಅಪಾರ ಸಾಮರ್ಥ್ಯ ; ಸುಸ್ಥಿರ ಇಂಧನ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಸಚಿವ ಎಚ್.ಕೆ.ಪಾಟೀಲ್ ಅಭಿಮತ
3. ಮಹಿಳಾ ಮೀಸಲಾತಿ ಮಸೂದೆ ದಕ್ಷಿಣ ಭಾರತದ ಸಂಸತ್ ಸ್ಥಾನ ಕಡಿಮೆ ಮಾಡುವ ಪಿತೂರಿ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
4. ಕಾಂಗ್ರೆಸ್‌ನ ಮಹಿಳಾ ವಿರೋಧಿ ನೀತಿ ಖಂಡಿಸಿ ಬೆಂಗಳೂರಿನಲ್ಲಿ ಸಂಸದ ಅನುರಾಗ್ ಸಿಂಗ್ ಠಾಕೂರ್ ಅಸಮಾಧಾನ
5. ಉತ್ತರಕನ್ನಡ ಜಿಲ್ಲೆಯ ಕಾಸರಕೋಡ ಕಡಲತೀರಕ್ಕೆ ಸತತ ೬ನೇ ಬಾರಿ ಬ್ಲೂ ಫ್ಲ್ಯಾಗ್ ಮಾನ್ಯತೆ

<><><><>

ಮಾನವ ಸಮಾಜ ನಿರ್ಮಾಣದಲ್ಲಿ ಪ್ರತಿಯೊಬ್ಬರೂ ಪಾಲುದಾರರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಹಾವೇರಿಯ ರಾಣೆಬೆನ್ನೂರು ತಾಲೂಕಿನ ನಿಟ್ಟೂರು ಗ್ರಾಮದಲ್ಲಿ ಇಂದು ಬೀರಲಿಂಗೇಶ್ವರ ಸ್ವಾಮಿ ದೇವಸ್ಥಾನದ ೫೦ನೇ ವರ್ಷದ ಸುವರ್ಣ ಮಹೋತ್ಸವ, ಭಕ್ತ ಕನಕದಾಸರ ಮಹಾದ್ವಾರದ ಉದ್ಘಾಟನೆ ಹಾಗೂ ಧರ್ಮಸಭಾ ಕಾರ್ಯಕ್ರಮದಲ್ಲೂ ಭಾಗವಹಿಸಿ ಮಾತನಾಡಿದ ಅವರು, ಮೂಢನಂಬಿಕೆಗಳನ್ನು ತೊರೆದು ವೈಚಾರಿಕತೆಯನ್ನು ಅಳವಡಿಸಿಕೊಳ್ಳಲು ಕರೆ ನೀಡಿದರು. ಬಸವಣ್ಣನವರು ತೋರಿದ ಕಾಯಕ ಮತ್ತು ಸಮಾನತೆಯ ಹಾದಿಯಲ್ಲಿ ಸಾಗುವಂತೆ ಸಲಹೆ ನೀಡಿದ ಅವರು, ಸಂವಿಧಾನದ ಆಧಾರ ಸ್ಥಂಭಗಳಾದ ಭ್ರಾತೃತ್ವದ ಆಶಯಗಳನ್ನು ತಮ್ಮ ಸರ್ಕಾರ ಪಾಲಿಸುತ್ತಿದೆ ಎಂದು ತಿಳಿಸಿದರು. ಇದಕ್ಕೂ ಮುನ್ನ ರಾಣೆಬೆನ್ನೂರಿನ ದೊಡ್ಡಕೆರೆ ಆವರಣದಲ್ಲಿಂದು ಜರುಗಿದ ಸಮಾರಂಭದಲ್ಲಿ ರಾಣೆಬೆನ್ನೂರು ತಾಲೂಕಿನ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ನೆರವೇರಿಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಿಳಾ ಮೀಸಲಾತಿ ಮಸೂದೆ ರಾಜ್ಯಸಭೆ ಮತ್ತು ಲೋಕಸಭೆಯಲ್ಲಿ ೨೦೨೩ರಲ್ಲಿಯೇ ಅಂಗೀಕಾರವಾಗಿದ್ದು, ಪ್ರಸ್ತುತ ಕ್ಷೇತ್ರ ಮರುವಿಂಗಡಣೆಯನ್ನು ಸೇರಿಸಿ ಮಂಡಿಸಿದ್ದ ಪರಿಣಾಮವಾಗಿ ಮಸೂದೆಗೆ ಸೋಲುಂಟಾಗಿದೆ. ಮಹಿಳಾ ಮೀಸಲಾತಿಗೆ ತಮ್ಮ ವಿರೋಧವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು. ಮಹಿಳೆಯರಿಗೆ ಶೇಕಡ ೩೩ರಷ್ಟು ಮೀಸಲಾತಿ ನೀಡಬೇಕೆಂದು ಬಿಜೆಪಿ ಎಂದಿಗೂ ಒತ್ತಾಯಿಸಿಲ್ಲ. ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳಾ ಮೀಸಲಾತಿಯನ್ನು ಸಂವಿಧಾನದ ೭೩, ೭೪ನೇ ತಿದ್ದುಪಡಿಗಳನ್ನು ರಾಜೀವ್ ಗಾಂಧಿಯವರು ಪ್ರಧಾನ ಮಂತ್ರಿಯಾಗಿದ್ದಾಗ ತಂದಿದ್ದರು. ಜಿಲ್ಲಾ ಮತ್ತು ತಾಲೂಕು ಪಂಚಾಯಿತಿಗಳಲ್ಲಿ ಮಹಿಳೆಯರಿಗೆ ಶೇಕಡಾ ೩೩ ಮೀಸಲಾತಿ ನೀಡಬೇಕೆಂದು ಬಿಜೆಪಿ ಎಂದಿಗೂ ಒತ್ತಾಯಿಸಿಲ್ಲ. ಈಗ ಮಾತ್ರ ಮಹಿಳಾ ಮೀಸಲಾತಿಗೆ ಒತ್ತಾಯಿಸಿ ರಾಜಕೀಯ ಮಾಡುತ್ತಿದ್ದಾರೆ ಎಂದರು. ಉತ್ತರ ಭಾರತದಲ್ಲಿ ಸ್ಥಾನಗಳು ಹೆಚ್ಚಾಗುವುದರ ಬಗ್ಗೆ ತಮ್ಮ ವಿರೋಧವೇ ಹೊರತು ಮಹಿಳಾ ಮೀಸಲಾತಿಗೆ ವಿರೋಧವಿಲ್ಲ ಎಂದು ಪುನರುಚ್ಚರಿಸಿದರು.

<><><><>

ಇಂಧನ ಕ್ಷೇತ್ರದಲ್ಲಿ ಸ್ವಾವಲಂಬಿಯಾಗಲು ಕರ್ನಾಟಕ ಅಪಾರ ಸಾಮರ್ಥ್ಯ ಹೊಂದಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ಎರಡು ದಿನಗಳ ಸುಸ್ಥಿರ ಇಂಧನ-೨೦೪೭ರ ಭಾರತಕ್ಕಾಗಿ ಕಾರ್ಯಸೂಚಿ ಎಂಬ ಅಂತಾರಾಷ್ಟ್ರೀಯ ಸಮ್ಮೇಳನದ ಸಮಾರೋಪ

ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ಇಂಧನ ಪರಿವರ್ತನೆ ಕೇವಲ ತಾಂತ್ರಿಕ ಬದಲಾವಣೆಯಲ್ಲ ಬದಲಿಗೆ ಅದೊಂದು ಕಾನೂನು ಮತ್ತು ಸಾಂಸ್ಥಿಕ ರೂಪಾಂತರವಾಗಿದೆ. ಪರಿಸರದ ರಕ್ಷಣೆ, ಭೂಬಳಕೆ ಮತ್ತು ಮಾರುಕಟ್ಟೆ ನಿಯಂತ್ರಣಕ್ಕೆ ಸಂಬಂಧಿಸಿದ ಸವಾಲುಗಳಿಗೆ ಕಾನೂನು, ಸಮಪರ್ಕವಾಗಿ ಸ್ಪಂದಿಸಬೇಕಿದೆ ಎಂದರು. ನವೀಕರಿಸಬಹುದಾದ ಇಂಧನ ಮೂಲಗಳ ಏಕೀಕರಣ ಮತ್ತು ಇಂಧನ ಸಂಗ್ರಹಣೆಯ ಸವಾಲುಗಳನ್ನು ಎದುರಿಸಲು ಪ್ರಸ್ತುತವಿರುವ ವಿದ್ಯುಚ್ಛಕ್ತಿ ಕಾಯ್ದೆಗೆ ಸುಧಾರಣೆ ಅಗತ್ಯವಿದೆ ಎಂದರು. ಭೂಸ್ವಾಧೀನ ಪ್ರಕ್ರಿಯೆಯಲ್ಲಿ ರೈತರ ಹಕ್ಕುಗಳನ್ನು ರಕ್ಷಿಸುವುದು ಸರ್ಕಾರದ ಆದ್ಯತೆಯಾಗಬೇಕು ಎಂದ ಅವರು, ಭೂಮಿ ನೀಡುವ ರೈತ ಕೂಡ ಇಂಧನ ಯೋಜನೆಯ ಹೂಡಿಕೆದಾರರು ಮತ್ತು ತಾಂತ್ರಿಕ ಪಾಲುದಾರರಷ್ಟೇ ಪ್ರಾಮುಖ್ಯತೆ ಹೊಂದುರುತ್ತಾನೆ ಎಂದರು. ರೈತರ ಭೂಮಿಗೆ ಕಡಿಮೆ ಬೆಲೆ ನಿಗದಿಪಡಿಸುವ ಅಸಮಾನತೆಯನ್ನು ಹೋಗಲಾಡಿಸಲು ಭೂಮಿಯ ಅಂತರ್ಗತ ಮೌಲ್ಯವನ್ನು ಪರಿಗಣಿಸುವುದು ಅತ್ಯಗತ್ಯ ಎಂದರು.

ಸಮಾರೋಪ ಸಮಾರಂಭದಲ್ಲಿ ಸುಪ್ರೀಂಕೋರ್ಟ್ ನ್ಯಾಯಮೂರ್ತಿ ಜಸ್ಟೀಸ್ ವಿಕ್ರಂನಾಥ್, ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಇಂಧನ ಸಚಿವ ಕೆ.ಜೆ.ಜಾರ್ಜ್, ಕರ್ನಾಟಕ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ಜಸ್ಟೀಸ್ ವಿಭು ಬಕ್ರು ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು. ಸಮ್ಮೇಳನದ ೨ನೇ ದಿನವಾದ ಇಂದು ಹಸಿರು ಇಂಧನ ಮತ್ತು ಸುಸ್ಥಿರ ತಂತ್ರಜ್ಞಾನದ ಅಳವಡಿಕೆ ಕುರಿತು ತಜ್ಞರು ವಿಚಾರಗೋಷ್ಠಿ ನಡೆಸಿದರು. ಸಮ್ಮೇಳನದಲ್ಲಿ ಇಂಧನ ಇಲಾಖೆಯ ಹಿರಿಯ ಅಧಿಕಾರಿಗಳು ಮತ್ತು ಜಾಗತಿಕ ತಜ್ಞರು ಪಾಲ್ಗೊಂಡು, ಭವಿಷ್ಯದ ಸವಾಲುಗಳನ್ನು ಎದುರಿಸಲು ಸೌರ ಮತ್ತು ಪವನಶಕ್ತಿಯ ಸಮರ್ಥ ಬಳಕೆಯ ಅಗತ್ಯತೆ ಕುರಿತು ಸಮಾಲೋಚಿಸಿದರು.

<><><><>

‘ಮಹಿಳಾ ಮೀಸಲಾತಿ ಮಸೂದೆಯು ದಕ್ಷಿಣ ಭಾರತದ ಸಂಸತ್ ಸ್ಥಾನಗಳನ್ನು ಕಡಿಮೆ ಮಾಡುವ ಪಿತೂರಿಯಾಗಿದೆ,’ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೇಂದ್ರ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ‘ದಕ್ಷಿಣ ರಾಜ್ಯಗಳಿಂದ ತಮಗೆ ಸ್ಥಾನಗಳು ಬೇಡ ಎಂಬ ಧೋರಣೆಯನ್ನು ಬಿಜೆಪಿ ತಳೆದಿದೆ ಎಂದರು. ಮಹದಾಯಿ ಯೋಜನೆ ವಿಳಂಬದ ಕುರಿತು ಕೇಂದ್ರದ ನಡೆಯನ್ನು ಟೀಕಿಸಿದ ಅವರು, ‘ಗೋವಾ ಸರ್ಕಾರದ ಭೀತಿಯಿಂದಾಗಿ ಕೇಂದ್ರ ಸರ್ಕಾರ ಮಹದಾಯಿ ಯೋಜನೆಗೆ ಅನುಮತಿ ನೀಡುತ್ತಿಲ್ಲ. ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರೊಂದಿಗೆ ಹಲವು ಬಾರಿ ಚರ್ಚಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದರು. ಇದೇ ವೇಳೆ ನೀರಾವರಿ ಯೋಜನೆಗಳ ಕುರಿತು ಮುಂದಿನ ಒಂದು ತಿಂಗಳೊಳಗೆ ಮಹತ್ವದ ನಿರ್ಧಾರ ಕೈಗೊಳ್ಳಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾಹಿತಿ ನೀಡಿದರು.

<><><><>

ಮಹಿಳಾ ಮೀಸಲಾತಿ ಮಸೂದೆ ವಿಚಾರದಲ್ಲಿ ಕಾಂಗ್ರೆಸ್ ಮತ್ತು ಅದರ ಮಿತ್ರ ಪಕ್ಷಗಳು ಮಹಿಳೆಯರಿಗೆ ದ್ರೋಹ ಮಾಡಿದ್ದು, ಇಂತಹ ಮಹಿಳಾ ವಿರೋಧಿ ಪಕ್ಷಗಳನ್ನು ದೇಶದ ಮಹಿಳೆಯರು ಕ್ಷಮಿಸುವುದಿಲ್ಲ ಎಂದು ಸಂಸದ ಅನುರಾಗ್ ಸಿಂಗ್ ಠಾಕೂರ್ ತಿಳಿಸಿದ್ದಾರೆ. ಬೆಂಗಳೂರಿನ ಬಿಜೆಪಿ ರಾಜ್ಯ ಪ್ರಧಾನ ಕಚೇರಿ ಜಗನ್ನಾಥ ಭವನದಲ್ಲಿ ಇಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಮತ್ತು ಮಿತ್ರ ಪಕ್ಷಗಳು ೫ನೇ ಬಾರಿ ಮಹಿಳಾ ಮೀಸಲಾತಿ ಮಸೂದೆಯನ್ನು ತಡೆ ಹಿಡಿಯುವ ಮೂಲಕ ರಾಜಕೀಯ ಪ್ರಾತಿನಿಧ್ಯದ ಹಕ್ಕಿನಿಂದ ಮಹಿಳೆಯರನ್ನು ವಂಚಿಸಿವೆ ಎಂದರು. ೨೦೨೩ರಲ್ಲಿ ಚುನಾವಣಾ ಕಾರಣಗಳಿಗಾಗಿ ಮಸೂದೆಯನ್ನು ವಿರೋಧಪಕ್ಷಗಳು ಬೆಂಬಲಿಸಿದ್ದವು ಎಂದ ಸಂಸದರು, ಕ್ಷೇತ್ರ ಪುನರ್ ವಿಂಗಡಣೆಯಿಂದ ದಕ್ಷಿಣ ಭಾರತದ ರಾಜ್ಯಗಳಿಗೆ ಯಾವುದೇ

ನಷ್ಟವಾಗುವುದಿಲ್ಲ ಎಂದು ತಿಳಿಸಿದರು. ವಿಧಾನಪರಿಷತ್ ಸದಸ್ಯೆ ಭಾರತಿ ಶೆಟ್ಟಿ, ಬಿಜೆಪಿ ರಾಜ್ಯ ಉಪಾಧ್ಯಕ್ಷೆ ಮಾಳವಿಕಾ ಅವಿನಾಶ್, ರಾಜ್ಯ ವಕ್ತಾರೆ ಕು.ಸುರಭಿ ಹೊದಿಗೆರೆ, ಮಹಿಳಾ ಮೋರ್ಚಾ ರಾಜ್ಯ ಉಪಾಧ್ಯಕ್ಷೆ ವಿಜಯಲಕ್ಷ್ಮೀ ಆನಂದ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

<><><><>

ಉತ್ತರಕನ್ನಡ ಜಿಲ್ಲೆಯ ಹೊನ್ನಾವರ ತಾಲೂಕಿನ ಕಾಸರಕೋಡ ಕಡಲತೀರಕ್ಕೆ ಸತತ ೬ನೇ ಬಾರಿ ಬ್ಲೂ ಫ್ಲ್ಯಾಗ್ ಮಾನ್ಯತೆ ದೊರೆತಿದ್ದು, ಇದರ ಅಂಗವಾಗಿ ಕಾಸರಕೋಡ ಕಡಲತೀರದಲ್ಲಿ ಭಾನುವಾರ ಬ್ಲೂ ಫ್ಲ್ಯಾಗ್‌ನ ಧ್ವಜಾರೋಹಣವನ್ನು ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕರಾದ ಮಂಗಳ ಗೌರಿ ಭಟ್ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೇಶಾದ್ಯಂತ ಈ ವರ್ಷ ೧೪ ಕಡಲತೀರಗಳಿಗೆ ಬ್ಲೂ ಫ್ಲ್ಯಾಗ್ ಮಾನ್ಯತೆ ದೊರೆತಿದ್ದು, ಕರ್ನಾಟಕದಲ್ಲಿ ಮೂರು ಕಡಲತೀರಗಳು ಈ ಪಟ್ಟಿಗೆ ಸೇರಿವೆ. ಅವುಗಳಲ್ಲಿ ಉತ್ತರ ಕನ್ನಡ ಜಿಲ್ಲೆಯ ಕಾಸರಕೋಡ ಕಡಲತೀರವೂ ಒಂದಾಗಿದ್ದು, ಕಾಸರಕೋಡ ಕಡಲತೀರಕ್ಕೆ ಇದು ಆರನೇ ಬಾರಿ ಬ್ಲೂ ಫ್ಲ್ಯಾಗ್ ಮಾನ್ಯತೆ ದೊರೆತಿದೆ. ಇಲ್ಲಿನ ಕಡಲತೀರದ ಸ್ವಚ್ಛತೆ, ಪ್ರವಾಸಿಗರ ಸುರಕ್ಷತೆ, ಉತ್ತಮ ಮೂಲ ಸೌಕರ್ಯಗಳ ವ್ಯವಸ್ಥೆ ಹಾಗೂ ನೈಸರ್ಗಿಕ ವಸ್ತುಗಳ ಬಳಕೆಯ ಮೂಲಕ ಅಭಿವೃದ್ಧಿಪಡಿಸಿರುವುದನ್ನು ಪರಿಗಣಿಸಿ ಈ ಗೌರವ ನೀಡಲಾಗಿದೆ ಎಂದರು.

<><><><>

ಬಬಲೇಶ್ವರ ಮತಕ್ಷೇತ್ರ ಸೇರಿದಂತೆ ಜಿಲ್ಲೆಯಲ್ಲಿ ಬಹುತೇಕ ಗ್ರಾಮಗಳಲ್ಲಿ ಹಳ್ಳ-ಕೊಳ್ಳಗಳು ಒತ್ತುವರಿಯಾಗಿವೆ. ರೈತರು ಸ್ವಯಂ ಪ್ರೇರಣೆಯಿಂದ ಹಳ್ಳ ಒತ್ತುವರಿ ತೆರವುಗೊಳಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ್ ಹೇಳಿದ್ದಾರೆ. ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ ವತಿಯಿಂದ ಬಬಲೇಶ್ವರ ತಾಲೂಕಿನ ವಿವಿಧ ಹಳ್ಳಿಗಳಿಗೆ ಅಡ್ಡಲಾಗಿ ಸರಣಿ ಚೆಕ್ ಡ್ಯಾಂ ರೀಚಾರ್ಜ್ ಶಾಫ್ಟ್‌ಗಳನ್ನು ನಿರ್ಮಾಣ ಮಾಡುವ ಮೂಲಕ ಅಂತರ್ಜಲ ಅಭಿವೃದ್ಧಿಪಡಿಸುವ ೬೪೪.೪೨ ಲಕ್ಷ ಕಾಮಗಾರಿಗೆ ಅರ್ಜುಣಗಿ ಗ್ರಾಮದಲ್ಲಿ ಭೂಮಿ ಪೂಜೆ ನೆರವೇರಿಸಿ ಸಚಿವರು ಮಾತನಾಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>